**Akashvani : Bangalore**
**Regional Bulletin In Kannada**
**22.03.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

<u>ಮುಖ್ಯಾಂಶಗಳು</u>

೧. ಕರ್ನಾಟಕ ಬಂದ್‌ಗೆ ರಾಜ್ಯದಲ್ಲಿ ನೀರಸ ಪ್ರತಿಕ್ರಿಯೆ

೨. ಒಳಮೀಸಲಾತಿ ಜಾರಿಗೆ ರಾಜ್ಯ ಸರ್ಕಾರ ಬದ್ಧ - ಗೃಹ ಸಚಿವ ಡಾ. ಜಿ. ಪರಮೇಶ್ವರ್

೩. ಹನಿಟ್ರ್ಯಾಪ್ ಪ್ರಕರಣ ತನಿಖೆಗೆ ಸಂಸದ ಗೋವಿಂದ್ ಕಾರಜೋಳ ಆಗ್ರಹ

೪. ಮುಂದಿನ ೪ ದಿನಗಳ ಕಾಲ ರಾಜ್ಯದ ಹಲವೆಡೆ ಮಳೆ ಸಂಭವ - ಹವಾಮಾನ ಇಲಾಖೆ ಮುನ್ಸೂಚನೆ

**<><*<><>*><>**

ಎಂಇಎಸ್ ಕಾರ್ಯಕರ್ತರ ಪುಂಡಾಟಿಕೆ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕನ್ನಡಪರ ಸಂಘಟನೆಗಳು ಇಂದು ಕರೆ ನೀಡಿದ್ದ ರಾಜ್ಯಾದ್ಯಂತ ಕರ್ನಾಟಕ ಬಂದ್‌ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಯಿತು. ವಾಹನಗಳ ಸಂಚಾರ ಎಂದಿನಂತೆ ಸಾಮಾನ್ಯವಾಗಿತ್ತು. ಪ್ರತಿಭಟನಾ ಮೆರವಣಿಗೆ ನಡೆಸಲು ಯೋಜಿಸಿದ್ದ ಕನ್ನಡಪರ ಹೋರಾಟಗಾರರಾದ ವಾಟಾಳ್ ನಾಗರಾಜ್, ಸಾ.ರಾ.ಗೋವಿಂದು ಸೇರಿದಂತೆ ಇತರೆ ಹೋರಾಟಗಾರರನ್ನು ಬೆಂಗಳೂರಿನ ಟೌನ್‌ಹಾಲ್ ಬಳಿ ಪೊಲೀಸರು ವಶಕ್ಕೆ ಪಡೆದರು. ಕರ್ನಾಟಕ ಬಂದ್‌ಗೆ ಉತ್ತರಕನ್ನಡ ಜಿಲ್ಲೆಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಯಿತು. ಜನಜೀವನ ಸಹಜವಾಗಿತ್ತು. ವಾಹನಗಳ ಸಂಚಾರ ಎಂದಿನಂತೆ ಸಾಮಾನ್ಯವಾಗಿತ್ತು. ಶಾಲಾ-ಕಾಲೇಜುಗಳು ಕಾರ್ಯ ನಿರ್ವಹಿಸಿದವು. ಮಾರುಕಟ್ಟೆ ಇನ್ನು ಅಂಗಡಿ, ಮುಂಗಟ್ಟುಗಳು ಎಂದಿನಂತೆ ತೆರೆದಿದ್ದು, ವ್ಯಾಪಾರ ವಹಿವಾಟು ಸಹಜ ಸ್ಥಿತಿಯಲ್ಲಿ ಇತ್ತು. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು.

**<><*<><>*><>**

ಒಳ ಮೀಸಲಾತಿ ಜಾರಿ ವಿಚಾರದಲ್ಲಿ ಸರ್ಕಾರದಲ್ಲಿ ಯಾವುದೇ ಗೊಂದಲ ಇಲ್ಲ. ಒಳ ಮೀಸಲಾತಿ ಜಾರಿಗೆ ಸರ್ಕಾರ ಬದ್ಧವಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ದಲಿತ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ಸುಪ್ರೀಂ ಕೋರ್ಟ್ ಸೂಚನೆಯಂತೆ ರಾಜ್ಯದಲ್ಲಿ ಪ್ರಾಯೋಗಿಕ ದತ್ತಾಂಶ ಇಲ್ಲ. ಜನಸಂಖ್ಯೆ ಆಧಾರದ ಮೇಲೆ ಒಳ ಮೀಸಲಾತಿ ಜಾರಿ ಮಾಡಲು ನ್ಯಾಯಾಲಯ ಸೂಚನೆ ನೀಡಿದೆ. ೨೦೧೧ರ ಜನಗಣತಿಯಲ್ಲಿ ಉಪಜಾತಿಗಳನ್ನು ನಮೂದಿಸದೇ ಇರುವುದರಿಂದ ವಿಳಂಬವಾಗಿದೆ ಎಂದರು. ಕಾಂತರಾಜು ಆಯೋಗ ವರದಿಯನ್ನು ಸರ್ಕಾರ ಶೀಘ್ರ ಸ್ವೀಕರಿಸಲಿದೆ. ಸಚಿವ ಸಂಪುಟದಲ್ಲಿ ವರದಿ ವಿಚಾರ ಚರ್ಚೆಯಾಗಿದ್ದು, ಮುಖ್ಯಮಂತ್ರಿಗಳು ಶೀಘ್ರದಲ್ಲಿ ಕಾಂತರಾಜು ವರದಿಯನ್ನು ಸ್ವೀಕರಿಸಲಿದ್ದಾರೆ ಎಂದು ಸಚಿವ ಡಾ.ಜಿ.ಪರಮೇಶ್ವರ್ ಮಾಹಿತಿ ನೀಡಿದರು.

ಧ್ವನಿ : ಡಾ. ಜಿ. ಪರಮೇಶ್ವರ್ (೨೬ ಸೆಕೆಂಡ್‌ಗಳು)

<><*<><>*><>

ರಾಜಧಾನಿ ಬೆಂಗಳೂರಿನಲ್ಲಿ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಪ್ರಸ್ತಾಪಿಸಲಾದ ಸ್ಥಳಗಳ ಕಾರ್ಯಸಾಧ್ಯತಾ ಅಧ್ಯಯನಕ್ಕಾಗಿ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಅಧಿಕಾರಿಗಳು ಏಪ್ರಿಲ್ ೭ ರಂದು ರಾಜ್ಯಕ್ಕೆ ಭೇಟಿ ನೀಡಲಿದ್ದಾರೆ ಎಂದು ಬೃಹತ್, ಮಧ್ಯಮ ಕೈಗಾರಿಕೆಗಳು ಮತ್ತು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ ಈಗಾಗಲೇ ಅಧ್ಯಯನಕ್ಕಾಗಿ ಪ್ರಾಧಿಕಾರಕ್ಕೆ ೧ ಕೋಟಿ ೨೧ ಲಕ್ಷ ರೂಪಾಯಿ ಶುಲ್ಕ ಪಾವತಿಸಿದೆ ಎಂದು ಮಾಹಿತಿ ನೀಡಿದ್ದಾರೆ. ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನೆಗಾಗಿ ಕನಕಪುರ ರಸ್ತೆಯಲ್ಲಿ ಎರಡು ಸ್ಥಳಗಳು ಮತ್ತು ಬೆಂಗಳೂರಿನ ಹೊರವಲಯದಲ್ಲಿರುವ ನೆಲಮಂಗಲ-ಕುಣಿಗಲ್ ರಸ್ತೆಯಲ್ಲಿ ಒಂದು ಸ್ಥಳವನ್ನು ಗುರುತಿಸಲಾಗಿದೆ ಎಂದು ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಯಾವುದೇ ಅಭಿವೃದ್ಧಿ ಕಾರ್ಯ ನಡೆಯುತ್ತಿಲ್ಲ ಎಂದು ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ಟೀಕಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಅಭಿವೃದ್ಧಿ ಶೂನ್ಯ ಸರ್ಕಾರವಾಗಿದೆ. ಸಮರ್ಪಕ ಆಡಳಿತವನ್ನೂ ನೀಡುತ್ತಿಲ್ಲ. ಗ್ಯಾರಂಟಿ ಹೆಸರಿನಲ್ಲಿ ಪ್ರತಿದಿನ ದಿನಬಳಕೆಯ ವಸ್ತುಗಳ ಬೆಲೆ ಏರಿಕೆ ಮಾಡಲಾಗುತ್ತಿದೆ. ಜನರ ಜೀವನಕ್ಕೆ ರಾಜ್ಯ ಸರಕಾರ ಹೊರೆಯಾಗಿದೆ ಎಂದರು. ಸಚಿವ ರಾಜಣ್ಣ, ಹನಿಟ್ರ್ಯಾಪ್‌ಗೆ ಒಳಗಾದ ಬಗ್ಗೆ ವಿಧಾನಸಭೆಯಲ್ಲೇ ಹೇಳಿಕೊಂಡಿದ್ದಾರೆ. ಅಲ್ಲದೇ ಇತರೆ ೪೮ ಮಂದಿಯ ಸಿಡಿ ಇದೆ ಎಂದು ಹೇಳಿದ್ದಾರೆ. ಸಚಿವರಾದ ಮಹದೇವಪ್ಪ, ಸತೀಶ್ ಜಾರಕಿಹೊಳಿ ಅವರೂ ಹನಿಟ್ರ್ಯಾಪ್ ಕುರಿತು ಮಾತಾಡಿದ್ದಾರೆ. ಈ ಬಗ್ಗೆ ಯಾವುದೇ ತನಿಖೆ ಆರಂಭಿಸಿಲ್ಲ. ಕೂಡಲೇ ಈ ಸಂಬಂಧ ತನಿಖೆ ನಡೆಸಬೇಕು. ಅನೈತಿಕತೆಯನ್ನು ಬೆಂಬಲಿಸುವ ಸರ್ಕಾರ ಉತ್ತಮ ಆಡಳಿತ ನೀಡಲು ಸಾಧ್ಯವಿಲ್ಲ. ಆದ್ದರಿಂದ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

<><*<><>*><>

ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ನೀರಿನ ಮೂಲಗಳು ಇರಬೇಕು. ಆದರೆ ಕೆರೆಗಳ ಒತ್ತುವರಿ ಹಾಗೂ ನಿರ್ಲಕ್ಷ್ಯದಿಂದ ಕೆರೆಗಳು ಬತ್ತುತ್ತಿವೆ. ಈ ದಿಸೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೆರೆಗಳ ಪುನಶ್ಚೇತನಕ್ಕಾಗಿ ಅಗತ್ಯ ಯೋಜನೆ ರೂಪಿಸಲಾಗುತ್ತಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಅಂತರ್ಜಲ ನಿರ್ದೇಶನಾಲಯದ ವತಿಯಿಂದ ವಿಶ್ವ ಜಲದಿನದ ಅಂಗವಾಗಿ ದೊಡ್ಡಬಳ್ಳಾಪುರ ತಾಲೂಕಿನ ಘಾಟಿ ಕ್ಷೇತ್ರದ ಸಮೀಪದ ಪಾಲ್ ಪಾಲ್ ದಿನ್ನೆ ಕೆರೆ ಅಭಿವೃದ್ಧಿಯ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

<><*<><>*><>

ಕಲುಷಿತ ಆಹಾರ ಸೇವಿಸಿ, ಮಂಡ್ಯ ಮಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮೇಘಾಲಯದ ೨೨ ವಿದ್ಯಾರ್ಥಿಗಳು ಹಾಗೂ ಮಳವಳ್ಳಿಯ ೭ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು ೨೯ ವಿದ್ಯಾರ್ಥಿಗಳು ಗುಣಮುಖರಾಗಿದ್ದರಿಂದ, ಇಂದು ಆಸ್ಪತ್ರೆಯಿಂದ ಬಿಡುಗಡೆಯಾದರು. ಮೇಘಾಲಯದ ವಿದ್ಯಾರ್ಥಿಗಳಿಗೆ

ಮಂಡ್ಯದ ಬಾಲಮಂದಿರದಲ್ಲಿ ವಾಸ್ತವ್ಯಕ್ಕೆ ವ್ಯವಸ್ಥೆ ಮಾಡಲಾಗಿದ್ದು, ಜಿಲ್ಲಾಧಿಕಾರಿ ಡಾ. ಕುಮಾರ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಪರಿಶೀಲನೆ ನಡೆಸಿದರು.

**<><*<><>*><>**

ರಾಜ್ಯದಲ್ಲಿ ಅಭಿವೃದ್ಧಿ, ಸಾಮಾಜಿಕ ಮತ್ತು ಆರ್ಥಿಕ ಭದ್ರತೆ ಒದಗಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್ ಹಾಗೂ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಕೋಲಾರ ಜಿಲ್ಲೆಯ ಮಾಲೂರು ತಾಲೂಕಿನ ಸಂತೇಹಳ್ಳಿ ಗ್ರಾಮ ಪಂಚಾಯಿತಿಯ ನೂತನ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಸರ್ಕಾರದ ಗ್ಯಾರಂಟಿ ಯೋಜನೆಗಳು, ನೀತಿಗಳು ಹಾಗೂ ಯೋಜನೆಗಳು ಕುಟುಂಬಗಳ ಆರ್ಥಿಕ ಸ್ಥಿರತೆಯನ್ನು ಹೆಚ್ಚಿಸುವ ಯೋಜನೆಗಳಾಗಿವೆ. ಕುಟುಂಬದಲ್ಲಿ ಆರ್ಥಿಕ ಸ್ಥಿರತೆ ಉತ್ತಮವಾಗಿದ್ದರೆ, ತಾಲೂಕು, ಜಿಲ್ಲೆ, ರಾಜ್ಯ ಅಭಿವೃದ್ಧಿ ಆಗಲು ಸಾಧ್ಯ ಎಂದರು.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಹಾಡೋನಹಳ್ಳಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ವಿಶ್ವ ಜಲ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ. ಬಿ.ಜಿ.ಹನುಮಂತರಾಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನೀರಿನ ಮೂಲಗಳನ್ನು ಉಳಿಸಿಕೊಳ್ಳುವುದರೊಂದಿಗೆ ನೀರಿನ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಜಲ ದಿನಾಚರಣೆ ಮಹತ್ವದ್ದಾಗಿದೆ. ಹಿಮ ನದಿಗಳ ಸಂರಕ್ಷಣೆಯು ಈ ವರ್ಷದ ಧ್ಯೇಯ ವಾಕ್ಯವಾಗಿದೆ ಎಂದು ಹೇಳಿದರು. ವಿಶ್ವಸಂಸ್ಥೆಯ ಪ್ರಕಾರ ನೈರ್ಮಲ್ಯ ಮತ್ತು ಶುದ್ಧ ನೀರಿನ ಕೊರತೆಯಿಂದ ಉಂಟಾಗುವ ಕಾಯಿಲೆಗಳಲ್ಲಿ ಪ್ರತಿವರ್ಷ ವಿಶ್ವದಾದ್ಯಂತ ಸುಮಾರು ೧೪ ರಿಂದ ೧೫ ಲಕ್ಷ ಜನ ಸಾವಿಗೀಡಾಗುತ್ತಿದ್ದಾರೆ. ಸಿಹಿ ನೀರಿನ ಮೂಲಗಳಾದ ನದಿಗಳು ಮತ್ತು ಹಿಮ ನದಿಗಳನ್ನು ಮಾಲಿನ್ಯ ರಹಿತಗೊಳಿಸಬೇಕಿದೆ ಎಂದರು.

**<><*<><>*><>**

ವಿಜಯಪುರ ಜಿಲ್ಲೆಯ ತಿಕೋಟಾ ತಾಲೂಕಿನ ಇಟ್ಟಂಗಿಹಾಳ ಗ್ರಾಮದ ವ್ಯಾಪ್ತಿಯಲ್ಲಿ ಒತ್ತುವರಿಯಾಗಿರುವ ಅಂದಾಜು ೨೦ ಕೋಟಿ ರೂಪಾಯಿ ಮೌಲ್ಯದ ಸರ್ಕಾರಿ ಜಮೀನನ್ನು ಒತ್ತುವರಿ ತೆರವುಗೊಳಿಸಿ, ವಶಕ್ಕೆ ಪಡೆಯಲಾಗಿದೆ ಎಂದು ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ತಿಳಿಸಿದ್ದಾರೆ. ಇಟ್ಟಂಗಿಹಾಳ ಗ್ರಾಮದ ವ್ಯಾಪ್ತಿಯಲ್ಲಿ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿ, ಮಾರಾಟ ಮಾಡುತ್ತಿರುವ ಬಗ್ಗೆ ತಿಳಿದುಬಂದ ಹಿನ್ನೆಲೆಯಲ್ಲಿ ಅತಿಕ್ರಮಣ ಕಾರ್ಯಾಚರಣೆ ಕೈಗೊಂಡು, ಒತ್ತುವರಿಯಾದ ಜಾಗವನ್ನು ತೆರವುಗೊಳಿಸಿ, ಸರ್ಕಾರಿ ಜಾಗವನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ. ಸರ್ಕಾರಿ ಜಮೀನು ಒತ್ತುವರಿ ಮಾಡಿಕೊಂಡಿರುವವರ ಮೇಲೆ ಕಾನೂನು ರೀತಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಮಾಹಿತಿ ನೀಡಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಕೋಲಾರ ನಗರದ ಜ್ಯೋತಿ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಕಚೇರಿಯನ್ನು ಸಹಕಾರ ಸಚಿವ ಕೆ.ಎನ್ ರಾಜಣ್ಣ ಉದ್ಘಾಟಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ವಿಧಾನಸಭೆಯಲ್ಲಿ ೧೮ ಜನ ಸದಸ್ಯರು ಅಮಾನತ್ತಾಗಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಒಂದು ಕಪ್ಪು

ಚುಕ್ಕೆ. ವಿರೋಧ ಪಕ್ಷದ  ಶಾಸಕರು ನಡೆದುಕೊಂಡ ರೀತಿ ಹಾಗೂ ಸದನಕ್ಕೆ ತೋರಿದ ಅಗೌರವ ಯಾರಿಗೂ ಶೋಭೆ ತರುವಂತಹದಲ್ಲ ಎಂದು ಹೇಳಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ,

ರಾಜ್ಯದ ಉತ್ತರ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಮಳೆಯಾಗಿದೆ. ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಒಣಹವೆ ಮುಂದುವರೆದಿದೆ.

ಕಲಬುರಗಿ ಜಿಲ್ಲೆಯ ಚಿಂಚೋಳಿಯಲ್ಲಿ ೩ ಸೆಂಟಿಮೀಟರ್, ಕಮಲಾಪುರದಲ್ಲಿ ೨ ಸೆಂಟಿಮೀಟರ್ ಹಾಗೂ ಸೇಡಂನಲ್ಲಿ ೧ ಸೆಂಟಿಮೀಟರ್ ಮಳೆಯಾಗಿದೆ. ಇದೇ ವೇಳೆ ರಾಯಚೂರು ಜಿಲ್ಲೆಯ ದೇವದುರ್ಗದಲ್ಲಿ ೧ ಸೆಂಟಿಮೀಟರ್ ಮಳೆಯಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಮುಂದಿನ ೨೪ ಗಂಟೆಗಳಲ್ಲಿ ದಕ್ಷಿಣಕನ್ನಡ, ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಸೇರಿದಂತೆ ಕೆಲವು ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ.

ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಭಾಗಶಃ ಮೋಡಕವಿದ ವಾತಾವರಣ. ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೩೩, ಕನಿಷ್ಠ ೨೨ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**